# ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 32 ಯುಟಿವಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 18-07-2018.

ಇಂದ:-

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ:-

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೆ,

**ವಿಷಯ:- ಬೆಂಗಳೂರಿನ ಕೆ.ಎಸ್. ಸ್ಕೂಲ್ ಆಫ್ ಇಂಜಿನೀಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನ ಹೊಸ ಕೋರ್ಸುಗಳಿಗೆ ಸಂಯೋಜನೆ ನೀಡುವ ಬಗ್ಗೆ.**

**ಉಲ್ಲೇಖ:- ತಮ್ಮ ಪತ್ರ ಸಂ. ವಿತಾವಿ/ಶೈಕ್ಷಣಿಕ/2017-18/ಎ1/9706, ದಿನಾಂಕ: 25-01-2018**

---

**ಬೆಂಗಳೂರಿನ ಕೆ.ಎಸ್. ಸ್ಕೂಲ್ ಆಫ್ ಇಂಜಿನೀಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನಲ್ಲಿ 2012-13 ಮತ್ತು 2013-14ನೇ** ಶೈಕ್ಷಣಿಕ ಸಾಲುಗಳಿಂದ ಹೊಸದಾಗಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಸ್ಥಳೀಯ ವಿಚಾರಣಾ ಸಮಿತಿಯ ವರದಿ, ಅಕಾಡೆಮಿಕ್ ಸೆನೆಟ್ ಮತ್ತು ಕಾರ್ಯಕಾರಿ ಮಂಡಳಿ ಶಿಫಾರಸ್ಸು ಹಾಗೂ ಎ.ಐ.ಸಿ.ಟಿ.ಯ ಅನುಮೋದನೆಯ ಹಿನ್ನೆಲೆಯಲ್ಲಿ, ಸಂವೀಕ್ಷಿಸಲಾಗಿದೆ.

2) ಎ.ಐ.ಸಿ.ಟಿ.ಯ ಅನುಮೋದನೆ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ ಪ್ರಸ್ತಾವನೆಯನ್ನಾಧರಿಸಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994ರ 40(5)ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ಬೆಂಗಳೂರಿನ ಕೆ.ಎಸ್. ಸ್ಕೂಲ್ ಆಫ್ ಇಂಜಿನೀಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನಲ್ಲಿ ಈ ಕೆಳಕಂಡ ಹೊಸ ಸ್ನಾತಕೋತ್ತರ ಕೋರ್ಸುಗಳು ಹಾಗೂ ವಿದ್ಯಾರ್ಥಿ ಪ್ರಮಾಣದೊಂದಿಗೆ** ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ. | ಕೋರ್ಸು | ಶೈಕ್ಷಣಿಕ ವರ್ಷ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | M.Tech in Engineering Analysis & Design | 2012-13 | 18 |
| 1 | M.Tech in VLSI Design & Embedded Systems | | 18 |
| 2 | M.Tech in Computer Science & Engg. | 2013-14 | 18 |
| | M.Tech in Structural Engg | | 18 |

<u>ಷರತ್ತುಗಳು:-</u>

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅವುಗಳನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;

....2

2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5) ಸ್ಥಳೀಯ ವಿಚಾರಣಾ ಸಮಿತಿ ಎಐಸಿಟಿಇ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ:-

ಪ್ರಾಂಶುಪಾಲರು, ಕೆ.ಎಸ್. ಸ್ಕೂಲ್ ಆಫ್ ಇಂಜಿನೀಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು - 560 062